## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 65 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 13-12-2021 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ಐಟಿ/ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ನಶಿಸಿ ಹೋಗುತ್ತಿರುವ ಸಂಪ್ರದಾಯ ವೃತಿಗಳನ್ನು ಮುಂದಿನ ತಲೆಮಾರಿಗೆ ತೆಗೆದುಕೊಂಡು ಹೋಗಲು ಸರ್ಕಾರ ಯಾವುದಾದರೂ ತರಬೇತಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆಯೇ; | 2021-22ನೇ ಸಾಲಿನಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಕರ್ನಾಟಕ ಕರ ಕುಶಲ ಅಭಿವೃದ್ಧಿ ನಿಗಮದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದ್ದು, ಶೀಘ್ರವಾಗಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಗುರಿ ಹೊಂದಲಾಗಿದೆ. |
| (ಆ) ಕಂಬಾರಿಗೆ, ಕುಂಬಾರಿಗೆ, ಬಡತಗಿತನ, ಗಾಣಿಗ, ಪತ್ರಾರಿಗೆ, ಶಿಲ್ಪಕಲೆಯಂತಹ ತರಬೇತಿಗೆ ಬಾಗಲಕೋಟ-ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಜನರಿಗೆ ತರಬೇತಿ ನೀಡಲಾಗಿದೆ; ಮತ್ತು ಎಷ್ಟು ಅವಧಿಗೆ ನೀಡಲಾಗಿದೆ; | ಕಂಬಾರಿಗೆ, ಕುಂಬಾರಿಗೆ, ಬಡಗಿತನ, ಗಾಣಿಗ, ಪತ್ರಾರಿಗೆ, ಶಿಲ್ಪಕಲೆಯಂತಹ ತರಬೇತಿಗೆ ಬಾಗಲಕೋಟ-ವಿಜಯಪುರ ಜಿಲ್ಲೆಗಳಲ್ಲಿ ಯಾವುದೇ ತರಬೇತಿ ಸಂಸ್ಥೆಗಳು ಸ್ಥಾಪಿತಗೊಂಡಿರುವುದಿಲ್ಲ. |
| (ಇ) ತರಬೇತಿಯ ನಂತರ ಸ್ವಯಂ ಉದ್ಯೋಗ ಮಾಡಲು ಸರ್ಕಾರ ಸಹಾಯಧನ ನೀಡಲು ಯೋಜನೆಗಳನ್ನು ರೂಪಿಸಿದೆಯೇ; | ಈ ಸಂಪ್ರದಾಯದ ವೃತ್ತಿಗಳಲ್ಲಿ ತರಬೇತಿ ಪಡೆದವರಿಗೆ ಡೇ-ನಲ್ಮ್ ಅಭಿಯಾನದಡಿ ಅಭ್ಯರ್ಥಿಗಳು ಸ್ವಯಂ ಉದ್ಯೋಗ ಮಾಡಲು ಇಚ್ಛಿಸಿದಲ್ಲಿ, ಅಭಿಯಾನದ ಸ್ವಯಂ ಉದ್ಯೋಗ ಕಾರ್ಯಕ್ರಮ ಉಪಘಟಕದಡಿ ಈ ಕೆಳಕಂಡಂತೆ ಅವಕಾಶವನ್ನು ಕಲ್ಪಿಸಲಾಗಿದೆ.<br>• ವೈಯಕ್ತಿಕ ಕಿರು ಉದ್ದಿಮೆ, ಗುಂಪು ಕಿರು ಉದ್ದಿಮೆ ಹಾಗೂ ಎಸ್‌ಹೆಚ್‌ಜಿ ಬ್ಯಾಂಕ್ ಕ್ರೆಡಿಟ್ ಲಿಂಕೇಜ್‌ಗೆ ಸಂಬಂಧಿಸಿದಂತೆ ಕ್ರಮವಾಗಿ ಬ್ಯಾಂಕಿನಿಂದ ರೂ.2.00, ರೂ.10.00 ಲಕ್ಷ ಮತ್ತು ರೂ.1.00 ಲಕ್ಷವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಶೇ.7 ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಿ ಪಾವತಿಸಲಾಗುವುದು ಹಾಗೂ ಸ್ವ-ಸಹಾಯ ಸಂಘಗಳು ನಿಯಮಿತವಾಗಿ ಸಾಲವನ್ನು ಮರು ಪಾವತಿಸಿದರೆ ಶೇ.3 ರಷ್ಟು ಹೆಚ್ಚುವರಿ ಬಡ್ಡಿ ಸಹಾಯಧನ ನೀಡಲಾಗುವುದು. |
| (ಈ) ಎಷ್ಟು ಜನರಿಗೆ ಸಹಾಯಧನ ನೀಡಲಾಗಿದೆ? | ಮೇಲಿನ ಉತ್ತರದ ಹಿನ್ನೆಲೆಯಲ್ಲಿ ಪ್ರಸ್ತುತ ಉದ್ಭವಿಸುವುದಿಲ್ಲ. |

**ಸಂಖ್ಯೆ: ಕೌಉಜೀಇ 69 ಉಜೀಪ್ರ 2021**

(ಡಾ॥ ಅಶ್ವಥ್ ನಾರಾಯಣ .ಸಿ.ಎನ್)
ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ದಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.